ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ತೋಟಗಾರಿಕೆ ಬೆಳೆಗಳ ಕುರಿತು

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು):-

1079 (1245) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ತೋಟಗಾರಿಕೆ ಬೆಳೆಗಳಾದ ತರಕಾರಿ/ಕಾಯಿ ಪಲ್ಯಗಳು ಹಣ್ಣು-ಹಂಪಲು ಪುಷ್ಪಗಳು ಹಾಗೂ ಇತರೆ ತೋಟಗಾರಿಕೆ ಬೆಳೆಗಳನ್ನು ಬೆಳೆದಿರುವ ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ತೋಟಗಾರಿಕೆ ಬೆಳೆಗಳ ಉತ್ಪನ್ನ ಪ್ರಮಾಣ ಗಣನೀಯವಾಗಿ ಏರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;ಅಲ್ಲದೇಋತುವಾರು ಬೆಳೆಗಳಾದ ಆಲೂಗಡ್ಡೆ, ಟೊಮಟೊ, ಮುಂತಾದ ಬೆಳೆಗಳ ಉತ್ಪನ್ನ ಅಧಿಕವಾಗಿಲ್ಲವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಕಾಲೋಚಿತ/ಋತುವಾರು ಬೆಳೆಗಳ ಉತ್ಪನ್ನ ಸಮೃದ್ಧಿ (Bumper) ಆದಾಗ ತೋಟಗಾರಿಕೆ ಬೆಳೆಗಳಿಗೆ ಸಂಭಾವನೆ ಬೆಲೆ (Renumerative price) ದೊರೆಯದೆ ಬೆಳೆಗಾರರು ಸಂಕಷ್ಟದಲ್ಲಿ ಸಿಲುಕಿ ತೋಟಗಾರಿಕೆ ಬೆಳೆಗಳನ್ನು ದಾರಿಯಲ್ಲಿ/ಚರಂಡಿಯಲ್ಲಿ ಒಗೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಾಳಾಗಬಲ್ಲ ಈ ಋತುಮಾನದ ತೋಟಗಾರಿಕೆ ಬೆಳೆಗಳನ್ನು ಸಕಾಲದಲ್ಲಿ ಸರ್ಕಾರದಿಂದ ಖರೀದಿಸಲು ಮತ್ತು ಕೋಲ್ಡ್ ಸ್ಟೋರೇಜ್‌ನಲ್ಲಿ ದಾಸ್ತಾನುಗಾಗಿ ಇಡಲು ಸರ್ಕಾರ ರೂಪಿಸಿರುವ ಯೋಜನೆಗಳೇನು ; ಈ ಯೋಜನೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಯ ಅಡಿಯಲ್ಲಿ ಎಷ್ಟು ರೈತರಿಗೆ ಸಹಾಯ ಒದಗಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಯೋಜನೆ ರಾಷ್ಟ್ರೀಯ ಕೃಷಿ ವಿಕಾಸ್ ಯೋಜನೆಯಡಿ ರಾಜ್ಯದಲ್ಲಿ ತೋಟಗಾರಿಕೆ ಕ್ಲಸ್ಟರ್‌ಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿಕೊಟ್ಟಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)